## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** 2023-24ನೇ ಸಾಲಿನಲ್ಲಿ ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಹೆಚ್ಚುವರಿ ಬರಪೀಡಿತ ತಾಲ್ಲೂಕುಗಳೆಂದು ಘೋಷಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕಂಇ 449 ಟಿಎನ್ಆರ್ 2023 ದಿನಾಂಕ:13-09-2023 ಮತ್ತು 12.10.2023
2. ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು ಇವರ ಪತ್ರ ಸಂಖ್ಯೆ:KSNDMC//04/MISC/2016, ದಿನಾಂಕ:31-10-2023.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 449 ಟಿಎನ್ಆರ್ 2023 ದಿನಾಂಕ:31-10-2023.

*****

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ದಿನಾಂಕ:13-09-2023 ಮತ್ತು 12.10.2023ರ ಸರ್ಕಾರದ ಆದೇಶದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು ಇವರ ಪ್ರಸ್ತಾವನೆಯಂತೆ, ಸಚಿವ ಸಂಪುಟದ ಉಪ ಸಮಿತಿ ಸಭೆಯ ನಿರ್ಣಯ ಹಾಗೂ ಸಚಿವ ಸಂಪುಟದ ತೀರ್ಮಾನದಂತೆ ಕೇಂದ್ರ ಸರ್ಕಾರದ ಬರ ನಿರ್ವಹಣೆ ಕೈಪಿಡಿ – 2020ರ ಬರ ಘೋಷಣೆ ಮಾರ್ಗಸೂಚಿಯಲ್ಲಿನ ಮಾನದಂಡಗಳನ್ವಯ ಜಿಲ್ಲಾಧಿಕಾರಿಗಳಿಂದ ಬೆಳೆಹಾನಿ ಸಮೀಕ್ಷೆಯ(Ground Truthing) ವರದಿಯನುಸಾರ 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯದ 31 ಜಿಲ್ಲೆಗಳ 236 ತಾಲ್ಲೂಕುಗಳ ಪೈಕಿ 216 ತಾಲ್ಲೂಕುಗಳಲ್ಲಿ ಬರಪೀಡಿತ ತಾಲ್ಲೂಕು ಎಂದು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ 6 ತಿಂಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಬರ ಪೀಡಿತ ತಾಲ್ಲೂಕುಗಳು ಎಂದು ಘೋಷಿಸಿ ಆದೇಶಿಸಲಾಗಿದೆ.

ಓದಲಾದ (2)ರಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು ಇವರು ಪ್ರಸ್ತಾವನೆಯಲ್ಲಿ ಕೇಂದ್ರ ಸರ್ಕಾರದ ಬರ ಕೈಪಿಡಿ-2020 ರಲ್ಲಿ ಬರ ಪರಿಸ್ಥಿತಿ ಘೋಷಿಸಲು ಅನುಸರಿಸಬೇಕಾದ ಮಾನದಂಡಗಳನ್ನು ಹಂತ-1 ರಲ್ಲಿ ಕಡ್ಡಾಯ ಮಾನದಂಡಗಳಾದ ಮಳೆ ಕೊರತೆ (ಶೇ.60ಕ್ಕಿಂತ ಹೆಚ್ಚು) ಅಥವಾ ಸತತ ಮೂರು ವಾರಗಳ ಅಥವಾ ಅದಕ್ಕಿಂತ ಹೆಚ್ಚು ಶುಷ್ಕ ವಾತಾವರಣ (Dry Spell) ಕಂಡು ಬಂದಿರಬೇಕು. ಹಂತ-2 ರಲ್ಲಿ ತತ್ಪರಿಣಾಮ ಮಾನದಂಡಗಳಾದ ಕೃಷಿ ಬಿತ್ತನೆ ಪ್ರದೇಶ, ಉಪಗ್ರಹ ಆಧಾರಿತ ಬೆಳೆ ಆರೋಗ್ಯ ಸೂಚ್ಯಂಕ (NDVI/ NDWI-Dev (%) and VIC (%)) ತೇವಾಂಶ ಕೊರತೆ (MAI) ಹಾಗೂ ನದಿಗಳಲ್ಲಿನ ಹರಿವು, ಜಲಾಶಯಗಳ ನೀರಿನ ಸಂಗ್ರಹಣೆ ಹಾಗೂ ಅಂತರ್ಜಲ ಮಟ್ಟ ಸೂಚ್ಯಂಕಗಳಲ್ಲಿನ ತೀವ್ರತೆಯನ್ನು ಆಧರಿಸಿ ಹೆಚ್ಚುವರಿಯಾಗಿ 07ತಾಲ್ಲೂಕುಗಳು ಬರ ಪರಿಸ್ಥಿತಿ ಉದ್ಭವಿಸಿರುವ ತಾಲ್ಲೂಕುಗಳೆಂದು ಗುರುತಿಸಲಾಗಿದೆ.

..2.

ಅದರಂತೆ, ಮೇಲೆ ಓದಲಾದ (4)ರಲ್ಲಿನ ದಿನಾಂಕ:31-10-2023ರ ಸುತ್ತೋಲೆಯಲ್ಲಿ ಮೂರನೇ ಹಂತದಲ್ಲಿ ಬರ ಪರಿಸ್ಥಿತಿ ಎದುರಿಸುತ್ತಿರುವ ತಾಲೂಕುಗಳಲ್ಲಿ ಶೇಕಡ 10 ರಷ್ಟು ಗ್ರಾಮಗಳನ್ನು Random ಆಗಿ ಆಯ್ಕೆ ಮಾಡಿ, ಪ್ರಮುಖ ಬೆಳೆಗಳನ್ನು ಗುರುತಿಸಿ ಪ್ರತಿ ಬೆಳೆಗಳ ಸುಮಾರು 5 sites ಇ-ಆಡಳಿತ ಇಲಾಖೆ ಅಭಿವೃದ್ಧಿ ಪಡಿಸಿರುವ App ಮೂಲಕ Ground Truthing or Verification ಮಾಡುವುದು. ಈ ಸಂಬಂಧ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಂದಾಯ, ಕೃಷಿ, ತೋಟಗಾರಿಕೆ ಅಧಿಕಾರಿಗಳು ಜಂಟಿ ಸಮೀಕ್ಷೆಯನ್ನು ಕೈಗೊಂಡು ಬರಕೈಪಿಡಿಯಲ್ಲಿ ನಮೂದಿಸಿರುವ Form No.11 ರಲ್ಲಿ ದೃಢೀಕೃತ ವರದಿಯನ್ನು ಸಲ್ಲಿಸಲು ತಿಳಿಸಲಾಯಿತು.

ಜಿಲ್ಲಾಧಿಕಾರಿಗಳಿಂದ ಬೆಳೆ ಸಮೀಕ್ಷೆ ಬಗ್ಗೆ ವರದಿಯನ್ನು ಪಡೆದು ಪರಿಶೀಲಿಸಿ ಹೊಸದಾಗಿ 07 ತಾಲ್ಲೂಕುಗಳು ಒಳಗೊಂಡಂತೆ ಒಟ್ಟು 236 ತಾಲ್ಲೂಕುಗಳ ಪೈಕಿ 223 ಬರಪೀಡಿತ ತಾಲ್ಲೂಕುಗಳೆಂದು ಅರ್ಹತೆ ಪಡೆದಿರುವುದು ಕಂಡುಬಂದಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶದ ಸಂಖ್ಯೆ: ಕಂಇ 449 ಟಿಎನ್ಆರ್ 2023,**
**ದಿನಾಂಕ: 04.11.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ ಬರ ನಿರ್ವಹಣೆ ಕೈಪಿಡಿ – 2020ರ ಬರ ಘೋಷಣೆ ಮಾರ್ಗಸೂಚಿಯಲ್ಲಿನ ಮಾನದಂಡಗಳನ್ವಯ ಜಿಲ್ಲಾಧಿಕಾರಿಗಳಿಂದ ಬೆಳೆಹಾನಿ ಸಮೀಕ್ಷೆಯ(Ground Truthing) ವರದಿಯನುಸಾರ 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಹೊಸದಾಗಿ 07 ತಾಲ್ಲೂಕುಗಳು ಅನುಬಂಧ-1ರಲ್ಲಿ ಇರುವಂತೆ ಬರಪೀಡಿತ ತಾಲ್ಲೂಕುಗಳೆಂದು ತಕ್ಷಣದಿಂದ ಜಾರಿಗೆ ಬರುವಂತೆ, ಮುಂದಿನ 6 ತಿಂಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಘೋಷಿಸಿ ಆದೇಶಿಸಿದೆ.

ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಬರ ನಿರ್ವಹಣೆಯ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸರ್ಕಾರದಿಂದ ಕಾಲಕಾಲಕ್ಕೆ SDRF/NDRF ನಿಯಮಗಳನ್ವಯ ಮಾರ್ಗಸೂಚಿಗಳನ್ನು ನೀಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

04/11/2023

**(ಟಿ.ಸಿ. ಕಾಂತರಾಜ್)**
ಸರ್ಕಾರದ ಜಂಟಿ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಹಾಗೂ ನೋಂ&ಮು)

**ಇವರಿಗೆ:**
ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯಪತ್ರ,, ವಿಕಾಸಸೌಧ, ಬೆಂಗಳೂರು – ಈ ಆದೇಶವನ್ನು ಕೂಡಲೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

1. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ ಜಿಲ್ಲೆಗಳು.
4. ಜಿಲ್ಲಾಧಿಕಾರಿಗಳು, ಬೀದರ್, ರಾಯಚೂರು, ವಿಜಯಪುರ ಜಿಲ್ಲೆಗಳು.

5. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್, ರಾಯಚೂರು, ವಿಜಯಪುರ.
6. ರಾಜ್ಯದ ಎಲ್ಲಾ ವಿದ್ಯುತ್ ಸರಬರಾಜು ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು.
7. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು, ಪಶು ಸಂಗೋಪನೆ ಮತ್ತು ಪಶು ವೈದ್ಯಕೀಯ ಸೇವೆಗಳ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು.
10. ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ಉಸ್ತುವಾರಿ ಕೇಂದ್ರ, ಅಟ್ಟೂರು ಬಡಾವಣೆ ಯಲಹಂಕ, ಬೆಂಗಳೂರು.
11. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13. ಉಪ ನಿರ್ದೇಶಕರು, ಖಜಾನೆ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.
15. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
16. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ,
17. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ,
18. ಮಾನ್ಯ ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
19. ಮಾನ್ಯ ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
20. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
21. ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
22. ಮಾನ್ಯ ಪಶುಸಂಗೋಪನೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
23. ಜಿಲ್ಲೆಗಳ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
24. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು. ಬೆಂಗಳೂರು.
25. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
26. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
27. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
28. ಸರ್ಕಾರದ ಜಂಟಿ ಕಾರ್ಯದರ್ಶಿ(ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
29. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
30. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
31. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
32. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
33. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
34. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
35. ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಪಶುವೈದ್ಯ ಇಲಾಖೆ, ವಿಕಾಸಸೌಧ, ಬೆಂಗಳೂರು.
36. ಸರ್ಕಾರದ ಕಾರ್ಯದರ್ಶಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ವಿಕಾಸಸೌಧ, ಬೆಂಗಳೂರು.

..4.

37. ಸರ್ಕಾರದ ಕಾರ್ಯದರ್ಶಿ, ಸಣ್ಣನೀರಾವರಿ ಇಲಾಖೆ, ವಿಕಾಸಸೌಧ, ಬೆಂಗಳೂರು.
38. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
39. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
40. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಲೆಕ್ಕಪತ್ರ ಶಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಅನುಬಂಧ-1**

**2023ರ ಮುಂಗಾರಿನಲ್ಲಿ ಅಕ್ಟೋಬರ್ ಅಂತ್ಯಕ್ಕೆ ಘೋಷಿಸಲಾದ ತೀವ್ರ ಬರ ಪೀಡಿತ 7 ತಾಲ್ಲೂಕುಗಳ ಪಟ್ಟಿ**

| ಕ್ರ.ಸಂ | ಜಿಲ್ಲೆಗಳು | ಕ್ರ.ಸಂ | ತಾಲ್ಲೂಕುಗಳು |
|---|---|---|---|
| 1 | ಬೀದರ್ | 1 | ಔರಾದ್ |
| | | 2 | ಬೀದರ್ |
| | | 3 | ಚಿಟಗುಪ್ಪಾ |
| | | 4 | ಹುಮ್ನಾಬಾದ್ |
| | | 5 | ಕಮಲ ನಗರ |
| 2 | ರಾಯಚೂರು | 6 | ಸಿಂಧನೂರು |
| 3 | ವಿಜಯಪುರ | 7 | ತಿಕೋಟಾ |

04/11/2023

**(ಟಿ.ಸಿ. ಕಾಂತರಾಜ್)**
ಸರ್ಕಾರದ ಜಂಟಿ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಹಾಗೂ ನೋಂ&ಮು)